# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | 1952(2259) |
| **ಸದಸ್ಯರ ಹೆಸರು** | : | ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ ಹೊಂದಿದವರು) |
| **ಉತ್ತರಿಸುವ ದಿನಾಂಕ** | : | 21.03.2022 |
| **ಉತ್ತರಿಸುವ ಸಚಿವರು** | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿರುವ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ಬೋಧಕ ಹಾಗೂ ಬೋಧಕೇತರ ಎಷ್ಟು ಹುದ್ದೆಗಳು ಖಾಲಿಯಿವೆ; (ವಿವರ ಒದಗಿಸುವುದು) | ರಾಜ್ಯದಲ್ಲಿರುವ ಅನುದಾನಿತ ಪ್ರೌಢಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿನ ಬೋಧಕ ಹಾಗೂ ಬೋಧಕೇತರ ಖಾಲಿ ಹುದ್ದೆಗಳ ವಿವರ ಈ ಕೆಳಕಂಡಂತಿದೆ:- (ಕೆಳಗಿನ ಕೋಷ್ಟಕಗಳು) |

| ಅನುದಾನಿತ ಪ್ರೌಢ ಶಾಲೆಗಳಲ್ಲಿನ ಖಾಲಿ ಬೋಧಕ ಹುದ್ದೆಗಳು | ಅನುದಾನಿತ ಪ್ರೌಢ ಶಾಲೆ ಗಳಲ್ಲಿನ ಖಾಲಿ ಬೋಧಕೇತರ ಹುದ್ದೆಗಳು | ಅನುದಾನಿತ ಪದವಿ ಪೂರ್ವ ಕಾಲೇಜು ಖಾಲಿ ಬೋಧಕ ಹುದ್ದೆಗಳು | ಅನುದಾನಿತ ಪದವಿ ಪೂರ್ವ ಕಾಲೇಜು ಖಾಲಿ ಬೋಧಕೇತರ ಹುದ್ದೆಗಳು |
|---|---|---|---|
| 2448 | 2919 | 3464 | 1654 |

| ಸರ್ಕಾರಿ ಪ್ರೌಢ ಶಾಲೆಗಳಲ್ಲಿನ ಖಾಲಿ ಬೋಧಕ ಹುದ್ದೆಗಳು | ಸರ್ಕಾರಿ ಪ್ರೌಢ ಶಾಲೆ ಗಳಲ್ಲಿನ ಖಾಲಿ ಬೋಧಕೇತರ ಹುದ್ದೆಗಳು | ಸರ್ಕಾರಿ ಪದವಿ ಪೂರ್ವ ಕಾಲೇಜು ಖಾಲಿ ಬೋಧಕ ಹುದ್ದೆಗಳು | ಸರ್ಕಾರಿ ಪದವಿ ಪೂರ್ವ ಕಾಲೇಜು ಬೋಧಕೇತರ ಖಾಲಿ ಹುದ್ದೆಗಳು |
|---|---|---|---|
| 12,286 | 2606 | 3204 | 1470 |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಆ | ಖಾಸಗಿ ಅನುದಾನಿತ ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ ರಾಜೀನಾಮೆ ಹಾಗೂ ಇನ್ನಿತರೆ ಕಾರಣಗಳಿಂದ ಎಷ್ಟು ಹುದ್ದೆಗಳು ಖಾಲಿಯಿವೆ; | ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ಸಂಖ್ಯೆ:- 2448<br>ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಖಾಲಿ ಇರುವ ಬೋಧಕೇತರ ಹುದ್ದೆಗಳ ಸಂಖ್ಯೆ:- 2919<br>ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳು:-3464<br>ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಬೋಧಕೇತರ ಹುದ್ದೆಗಳು:-1654 |
| ಇ | ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು) | **ಖಾಸಗಿ ಅನುದಾನಿತ ಪ್ರೌಢಶಾಲೆಗಳು :**<br>ಖಾಸಗಿ ಅನುದಾನಿತ ಪ್ರೌಢ ಶಾಲೆಗಳಲ್ಲಿ ದಿನಾಂಕ:31-12-2015ರ ಪೂರ್ವದಲ್ಲಿ ನಿಧನ, ನಿವೃತ್ತಿ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ತೆರವಾದ 3633 ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಆದೇಶ ಸಂಖ್ಯೆ: ಇಡಿ 14 ಎಸ್.ಇ.ಪಿ 2017, ದಿನಾಂಕ:25-09-2018ರಲ್ಲಿ ಅನುಮೋದನೆ ನೀಡಲಾಗಿತ್ತು. |

ಆದರೆ, ಅನುದಾನಿತ ಸಂಸ್ಥೆಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಹೊಸದಾಗಿ ಸಹಮತಿ ನೀಡುವಂತಿಲ್ಲ ಎಂದು ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ 157 ವೆಚ್ಚ-8 ದಿನಾಂಕ:10/06/2020ರಲ್ಲಿ ನಿರ್ದೇಶನ ನೀಡಲಾಗಿದೆ.

ಆದಾಗ್ಯೂ, ಪುನ: ಆರ್ಥಿಕ ಇಲಾಖೆಗೆ ಪ್ರಸ್ತಾವನೆ ಸಲ್ಲಿಸಿದ ಮೇರೆಗೆ ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ: 31/12/2015ರ ಪೂರ್ವದಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಾಗಿರುವ ಹುದ್ದೆಗಳ ಪೈಕಿ ಈಗಾಗಲೇ ಇಲಾಖೆಯಿಂದ ಅನುಮೋದನೆಗೊಂಡು ನೇಮಕಾತಿ ಪ್ರಕ್ರಿಯೆಯು ಇಲಾಖೆಯ ಹಂತದಲ್ಲಿ ಬಾಕಿಯಿರುವ ಅನುದಾನಿತ ಪ್ರೌಢಶಾಲೆಯ 257 ಭೋದಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮೋದನೆ ನೀಡಲಾಗಿದೆ.

ಮುಂದುವರೆದು, ಅನುದಾನಿತ ಪ್ರೌಢಶಾಲೆಗಳಲ್ಲಿ ದಿನಾಂಕ: 31/12/2015ರ ಪೂರ್ವದಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತರೆ ಕಾರಣಗಳಿಂದ ಖಾಲಿಯಾಗಿರುವ ಬಾಕಿ 1924 ಹುದ್ದೆಗಳನ್ನು ಭರ್ತಿ ಮಾಡಲು ಸಹಮತಿ ನೀಡುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿದೆ.

**ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜುಗಳು :**

ದಿನಾಂಕ:31/12/2015ರವರೆಗೆ ಖಾಸಗಿ ಅನುದಾನಿತ ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ನಿಧನ, ರಾಜೀನಾಮೆ ಮತ್ತು ಇತ್ಯಾದಿ ಕಾರಣಗಳಿಂದ ತೆರವಾದ ಬೋಧಕ ಹುದ್ದೆಗಳ ಪೈಕಿ ನಿಗದಿತ ಕಾರ್ಯಭಾರವಿರುವ ಒಟ್ಟು 998 ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅವಕಾಶ ಕಲ್ಪಿಸಿದೆ.

ಸದರಿ 998 ಹುದ್ದೆಗಳಲ್ಲಿ ಈಗಾಗಲೇ 323 ಹುದ್ದೆಗಳನ್ನು ತುಂಬಲಾಗಿದೆ. ಉಳಿದ 675 ಹುದ್ದೆಗಳ ಪೈಕಿ 436 ಹುದ್ದೆಗಳಿಗೆ ಸಂಬಂಧಿಸಿದ ಆಡಳಿತ ಮಂಡಳಿಯಿಂದ ಪ್ರಸ್ತಾವನೆ ಸಲ್ಲಿಸಿರುವುದಿಲ್ಲ. ಬಾಕಿ ಉಳಿದ 239 ಹುದ್ದೆಗಳು ಇಲಾಖೆಯ/ ಅಧೀನ ಕಛೇರಿಗಳಲ್ಲಿ ಪರಿಶೀಲನಾ ಹಂತದಲ್ಲಿ ಬಾಕಿ ಉಳಿದಿರುತ್ತದೆ.

ಇಪಿ 123 ಎಸ್‌ಇಎಸ್ 2022

(ಬಿ.ಸಿ.ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು